**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅ. ದೇವೇಗೌಡ ರವರ ನಿಯಮ 72ರ ಮೇರೆಗೆ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ :-**

ಕಾಂತರಾಜು ಅಧ್ಯಕ್ಷರಾಗಿದ್ದ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ದತ್ತಾಂಶ ಮತ್ತು ಸಮೀಕ್ಷೆಯು ಹಿಂದುಳಿದ ವರ್ಗಗಳ ನಾಗರೀಕ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ವರದಿಗೆ ಮಾತ್ರ ಸೀಮಿತವಾಗಿದೆಯೇ ಇಲ್ಲವಾದ್ದಲ್ಲಿ ಯಾವ್ಯಾವ ಅಂಶಗಳ ಬಗ್ಗೆ ಸಮೀಕ್ಷೆ ಮಾಡಲು ಆಯೋಗ ಯಾವ್ಯಾವ ಅಂಶಗಳ ಬಗ್ಗೆ ಸಮೀಕ್ಷೆ ಮಾಡಿ ಸಮೀಕ್ಷೆಯಲ್ಲಿ ರಾಜ್ಯದ ನಾಗರೀಕರ ಜಾತಿ ಜನಗಣತಿಯನ್ನು ಮಾಡಲು ಸರ್ಕಾರ ಆದೇಶಿಸಿದೆಯೇ ರಾಜ್ಯ ಸರ್ಕಾರದಿಂದ ಜಾತಿ ಜನಗಣತಿಯನ್ನು ಮಾಡಲು ಅಥವಾ ಜನಗಣತಿಯನ್ನು ಕಾಂತರಾಜು ಆಯೋಗದಿಂದ ಮಾಡಿಸಿ ಕರ್ನಾಟಕ ಸರ್ಕಾರಕ್ಕೆ ಅಧಿಕಾರ ಇದೆಯೇ; ಇದ್ದಲ್ಲಿ ಯಾವ ಕಾಯ್ದೆಯಡಿ ನಿಯಮಾವಳಿಯಡಿ ಅಧಿಕಾರವಿದೆಯೆಂಬ ಬಗ್ಗೆ, ಪ್ರತಿ ವರ್ಷಕೊಮ್ಮೆ ರಾಜ್ಯದ ಹಿಂದುಳಿದ ವರ್ಗಗಳ ನಾಗರೀಕ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಯ ಸಮೀಕ್ಷೆಯನ್ನು ಮಾಡಬೇಕೆಂಬ ಕುರಿತು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಕಾಯ್ದೆಯಲ್ಲಿದೆಯೇ ಹಾಗೂ ಈ ಕುರಿತು ಅನುಷ್ಠಾನಕ್ಕೆ ಸರ್ಕಾರ ಆಯೋಗ ಕೈಗೊಂಡಿರುವ ಕ್ರಮಗಳು ಹಾಗೂ ಕಾಂತರಾಜು ಅಧ್ಯಕ್ಷತೆಯ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಜನವರಿ 2014 ರಲ್ಲಿ ನೇಮಕಗೊಂಡು ಮಾಹಿತಿ ಸಂಗ್ರಹಿಸಿ ವರದಿ ನೀಡಿದೆ ಇನ್ನು ಒಂದು ತಿಂಗಳು ಕಳೆದರೆ 10 ವರ್ಷಗಳನ್ನು ಪೂರೈಸುವುದರಿಂದ ಈ ಹಳೆಯದಾದ ಸಮೀಕ್ಷೆಯ ದತ್ತಾಂಶದಡಿ ವರದಿ ಸಿದ್ದಪಡಿಸುವ ಬದಲು ಹೊಸದಾಗಿ ಸಮೀಕ್ಷೆ ಮಾಡಿಸುವುದರಿಂದ ರಾಜ್ಯದ ನಾಗರೀಕರ ಬದಲಾದ ಇತ್ತೀಚಿನ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಗೊತ್ತಾಗುತ್ತಿವೆಯೇ. ಇತ್ತೀಚಿನ ಸಾಮಾಜಿಕ ಶೈಕ್ಷಣಿಕ ಸ್ಥಿತಿಗತಿಗಳ ಆಧಾರದ ಮೇಲೆ ಮೀಸಲಾತಿ ಬಗ್ಗೆ ತೀರ್ಮಾನ ಕೈಗೊಳ್ಳುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

**ಉತ್ತರ :-**

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1995ರ ಕಲಂ 9 (1) (ii) ರಲ್ಲಿ "ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಬಗ್ಗೆ ಸರ್ವೆ ಮಾಡುವುದು" ಎಂದು ಹಾಗೂ ಕಲಂ 11 (1)ರಲ್ಲಿ ರಾಜ್ಯ ಸರ್ಕಾರವು ಯಾವುದೇ ಸಮಯದಲ್ಲಿ ಮತ್ತು ಈ ಅಧಿನಿಯಮವು ಜಾರಿಗೆ ಬಂದ ದಿನಾಂಕದಿಂದ 10 ವರ್ಷಗಳ ಅವಧಿಯು ಮುಕ್ತಾಯವಾದಾಗ ಮತ್ತು ಅದರ ನಂತರ ಬರುವ ಪ್ರತಿ 10 ವರ್ಷಗಳ ಅವಧಿ ಮುಕ್ತಾಯವಾಗುವಾಗ ಹಿಂದುಳಿದ ವರ್ಣ ಉಳಿಯದೇ ಹೋಗಿರುವ ವರ್ಣಗಳನ್ನು ತೆಗೆದುಹಾಕುವ ಅಥವಾ ಹೊಸ ಹಿಂದುಳಿದ ವರ್ಗಗಳನ್ನು ಅಂಥ ಪಟ್ಟಿಯಲ್ಲಿ ಸೇರಿಸುವುದನ್ನು ಗಮನದಲ್ಲಿರಿಸಿಕೊಂಡು ಪಟ್ಟಿಗಳನ್ನು ಪುನರ್ ಪರಿಷ್ಕರಿಸತಕ್ಕದ್ದು.

ಅದರಂತೆ, ರಾಜ್ಯ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 271 ಬಿಸಿಎ 2013 (ಭಾಗ-1) ದಿನಾಂಕ:23.01.2014 ರನ್ವಯ 2015ನೇ ಸಾಲಿನಲ್ಲಿ ಶ್ರೀ ಹೆಚ್.ಕಾಂತರಾಜ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳಲಾಗಿರುತ್ತದೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015 ಅನ್ನು ರಾಜ್ಯಾದ್ಯಂತ ಏಪ್ರಿಲ್ 11, 2015 ರಿಂದ ಪ್ರಾರಂಭಿಸಿ, ಮೇ 30, 2015 ರಂದು ಪೂರ್ಣಗೊಳಿಸಲಾಗಿರುತ್ತದೆ.

Scanned by CamScanner

**ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ 2015ರ ಉದ್ದೇಶಗಳು ಈ ಕೆಳಕಂಡಂತಿರುತ್ತವೆ.**

- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಜಾತಿಗಳು ಹಾಗೂ ಇತರ ಜಾತಿಗಳನ್ನೊಳಗೊಂಡಂತೆ ರಾಜ್ಯದ ಪ್ರತಿಯೊಂದು ಕುಟುಂಬದ ಸಮಗ್ರ ಸಮೀಕ್ಷೆಯನ್ನು ಕೈಗೊಂಡು ವಿವಿಧ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ಬಗ್ಗೆ ವಿಶ್ಲೇಷಣೆ ಮಾಡಿ, ಹಿಂದುಳಿದ ವರ್ಗಗಳ ಪಟ್ಟಿಯನ್ನು ಪರಿಷ್ಕರಿಸುವ ಕುರಿತು ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಜವಾಬ್ದಾರಿಯನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಹೊಂದಿರುತ್ತದೆ.

- ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ಸಮೀಕ್ಷೆಯಲ್ಲಿ 54 ಅಂಶಗಳನ್ನೊಳಗೊಂಡ ನಮೂನೆ-3ರಲ್ಲಿ ರಾಜ್ಯದ ಎಲ್ಲಾ ನಾಗರಿಕರ ಮಾಹಿತಿಯನ್ನು ಸಂಗ್ರಹಿಸಿ ಬಿ.ಇ.ಎಲ್ ಸಂಸ್ಥೆಯಿಂದ ಗಣಕೀಕರಣಗೊಳಿಸಲಾಗಿರುತ್ತದೆ.

- ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ಸಮೀಕ್ಷಾ ಕಾರ್ಯಕ್ಕಾಗಿ ಒಟ್ಟು ರೂ.192.79 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಈವರೆವಿಗೂ ರೂ.164.84 ಕೋಟಿಗಳನ್ನು ಖರ್ಚು ಮಾಡಲಾಗಿರುತ್ತದೆ.

- ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ಸಮೀಕ್ಷೆಯ ವರದಿಯನ್ನು ಇದುವರೆವಿಗೂ ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

**ಸಂಖ್ಯೆ: ಹಿಂವಕ 318 ಬಿಇಟಿ 2023**

**(ಶಿವರಾಜ ಎಸ್. ತಂಗಡಗಿ)**
**ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ**
**ಕನ್ನಡ ಮತ್ತು ಸಂಸ್ಕೃತಿ ಸಚಿವರು**

Scanned by CamScanner